# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 963 |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ,<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13–12–2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಸ್ತೆಗಳ ಅಕ್ಕಪಕ್ಕದಲ್ಲಿ ಗಿಡಗಂಟೆಗಳು ಬೆಳೆದು ರಸ್ತೆಯಲ್ಲಿ ಸಂಚರಿಸುವ ವಾಹನಗಳಿಗೆ ಅಡಚಣೆಯುಂಟಾಗಿ ಅಪಘಾತಗಳು ಸಂಭವಿಸಿ ಪ್ರಾಣಹಾನಿಯಂತಹ ಅವಘಡಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು; | ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆಗಳ ಅಕ್ಕಪಕ್ಕದಲ್ಲಿ ಬೆಳೆಯುವ ಗಿಡಗಂಟೆಗಳನ್ನು ಕಾಲಕಾಲಕ್ಕೆ ತೆರವುಗೊಳಿಸಲಾಗುತ್ತಿದ್ದು, ಇದರಿಂದ ಹೆದ್ದಾರಿಯಲ್ಲಿ ಸಂಚರಿಸುವ ವಾಹನಗಳಿಗೆ ಯಾವುದೇ ಅಡಚಣೆ ಹಾಗೂ ಯಾವುದೇ ಅಪಘಾತ ಸಂಭವಿಸದಂತೆ ಕ್ರಮ ವಹಿಸಲ ಆಗುತ್ತಿದೆ. ಸಾಮಾನ್ಯವಾಗಿ ಅವೆನ್ಯೂ ಸಸ್ಯಗಳನ್ನು (Avenue plantation) ಹೊರತುಪಡಿಸಿ ROW ಅನ್ನು ಗಿಡಗಂಟೆಗಳಿಂದ ಮುಕ್ತವಾಗಿರಿಸಲು ಕ್ರಮ ಕೈಗೊಂಡು ರಸ್ತೆಗಳನ್ನು ವಾಹನ ಸಂಚಾರಕ್ಕೆ ಯೋಗ್ಯವಾಗಿರಿಸಲಾಗಿರುತ್ತದೆ. |
| ಆ) | ಯಾದಗಿರಿ ಜಿಲ್ಲೆ ವಡಗೇರ ತಾಲ್ಲೂಕಿನ ಬೆಂಡೆಬೆಂಬಳಿ ಗ್ರಾಮದಿಂದ ಸಂಗಮವರೆಗೆ ಹೋಗುವ ಪ್ರಮುಖ ರಸ್ತೆಯ ಅಕ್ಕಪಕ್ಕದಲ್ಲಿ ಜಾಲಿಗಿಡಗಳು ಬೆಳೆದು ಸಂಚಾರಕ್ಕೆ ತೀವ್ರ ತೊಂದರೆಯುಂಟಾಗಿ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಹಾಗಿದಲ್ಲಿ ತಪ್ಪಿತಸ್ಥರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ವಡಗೇರಾ ತಾಲ್ಲೂಕಿನಲ್ಲಿ ರಸ್ತೆಯ ಅಕ್ಕಪಕ್ಕ ಗಿಡಗಂಟೆಗಳು ಬೆಳೆದು ಸಂಚಾರಕ್ಕೆ ತೊಂದರೆಯುಂಟಾಗುತ್ತಿರುವ ರಸ್ತೆಗಳ ಮಾಹಿತಿ ನೀಡುವುದು; | ಯಾದಗಿರಿ ಜಿಲ್ಲೆ ವಡಗೇರ ತಾಲ್ಲೂಕಿನ ಬೆಂಡೆಬೆಂಬಳಿ ಗ್ರಾಮದಿಂದ ಸಂಗಮದವರೆಗಿನ ರಸ್ತೆಯ ನಿರ್ವಹಣೆ ಕಾಮಗಾರಿಯಲ್ಲಿ ಜಂಗಲ್ ಕತ್ತರಿಸುವ ಕೆಲಸವು ಪ್ರಗತಿಯಲ್ಲಿರುತ್ತದೆ. ಸದರಿ ರಸ್ತೆಯು ಜಿಲ್ಲಾ ಮುಖ್ಯ ರಸ್ತೆಯಾಗಿದ್ದು, 5.50 ಮೀ ಅಗಲ ಕ್ಯಾರೇಜ್ ವೇ ಹೊಂದಿದ್ದು ಒಟ್ಟು 33.10 ಕಿ.ಮೀ ಉದ್ದವಿರುತ್ತದೆ.<br><br>ವಡಗೇರ ತಾಲ್ಲೂಕಿನ ರಸ್ತೆಗಳು ಶಃಪುರ ಉಪವಿಭಾಗ ವ್ಯಾಪ್ತಿಯಲ್ಲಿದ್ದು, ಪ್ರಸಕ್ತ ಸಾಲಿನಲ್ಲಿ ಶಹಪುರ ಲೋಕೋಪಯೋಗಿ ಇಲಾಖೆ ಉಪವಿಭಾಗ ವ್ಯಾಪ್ತಿಯಲ್ಲಿನ ರಾಜ್ಯ ಹೆದ್ದಾರಿಗಳ ನಿರ್ವಹಣೆಗೆ ರೂ.175.00 ಲಕ್ಷ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ನಿರ್ವಹಣೆಗಾಗಿ ರೂ.125.00 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ಕೆಲಸಗಳು ಪ್ರಗತಿಯಲ್ಲಿವೆ. |

| | | |
|---|---|---|
| ಇ) | ಇತ್ತೀಚೆಗೆ ಇದೇ ರಸ್ತೆಯಲ್ಲಿ ಸಂಚರಿಸುವಾಗ ಸರ್ಕಾರಿ ಬಸ್ ಅಪಘಾತದಲ್ಲಿ ತಂದೆ ಮತ್ತು ಇಬ್ಬರು ಮಕ್ಕಳು ಮರಣ ಹೊಂದಿದ್ದು, ಗಾಯಾಳುಗಳು ಆಸ್ಪತ್ರೆಗಳಲ್ಲಿ ಜೀವನ್ಮರಣ ಹೋರಾಟ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರದ ನಿರ್ಲಕ್ಷ್ಯದಿಂದ ಸಂಭವಿಸಿದ ಸಾವು–ನೋವುಗಳಿಗೆ ಹೊಣೆಗಾರರು ಯಾರು; ತಮ್ಮದಲ್ಲದ ತಪ್ಪಿನಿಂದ ಪ್ರಾಣಹಾನಿ ಸಂಭವಿಸಿ ಬಡ ಕುಟುಂಬಗಳು ಬೀದಿಗೆ ಬಂದಂತೆ ಆಗುವುದಿಲ್ಲವೇ; (ಸಂಪೂರ್ಣ ಮಾಹಿತಿ ನೀಡುವುದು ). | ಇತ್ತೀಚೆಗೆ ಸದರಿ ರಸ್ತೆಯಲ್ಲಿ ಶಿವಪೂರ ಗ್ರಾಮದ ಬಳಿ ಅಪಘಾತ ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅಪಘಾತ ಸಂಭವಿಸಿರುವದಕ್ಕೆ ಕೆ.ಕೆ.ಆರ್.ಟಿ.ಸಿ. ಬಸ್ ನಂ.ಕೆ.ಎ.33 ಎಫ್–0372 ರ ವಾಹನ ಚಾಲಕನು ಅತಿವೇಗ ಮತ್ತು ನಿರ್ಲಕ್ಷ್ಯದಿಂದ ಅಡ್ಡಾದಿಡ್ಡಿಯಾಗಿ ಚಲಾಯಿಸಿಕೊಂಡು ಬಂದಿದ್ದರಿಂದ, ದ್ವಿಚಕ್ರ ವಾಹನ ಸಂಖ್ಯೆ:ಕೆ.ಎ.33 ಕೆ–1988ಕ್ಕೆ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿರುತ್ತದೆ ಎಂದು ಪ್ರಥಮ ತನಿಖಾ ವರದಿ (ಎಫ್.ಐ.ಆರ್) ಸಂಖ್ಯೆ: 0280/2023 ದಿನಾಂಕ:15.11.2023 ರಲ್ಲಿ ತಿಳಿಸಲಾಗಿರುತ್ತದೆ. ಪ್ರಸ್ತುತ ರಸ್ತೆಯ ಸ್ಥಿತಿಯು ಉತ್ತಮವಾಗಿದ್ದು, ವಾಹನ ಸಂಚಾರಕ್ಕೆ ಯೋಗ್ಯವಾಗಿರುತ್ತದೆ. |

ಕಡತ ಸಂಖ್ಯೆ: ಲೋಇ 86 ಸಿಐಎಸ್ 2023 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು